ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1459(1713)
ಸದಸ್ಯರ ಹೆಸರು : ಶ್ರೀ ಡಾ:ವೈ.ಎ ನಾರಾಯಣಸ್ವಾಮಿ
ಉತ್ತರಿಸುವ ದಿನಾಂಕ : 14.03.2022
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಕರ್ನಾಟಕ ರಾಜ್ಯದಲ್ಲಿರುವ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು;	ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಪ್ರಸ್ತುತ ಅಗತ್ಯಕ್ಕಿಂತ ಹೆಚ್ಚುವರಿ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದು, ಹೆಚ್ಚುವರಿ ಅನುದಾನಿತ ಹುದ್ದೆಗಳು ಖಾಲಿಯಾದಲ್ಲಿ ಅಥವಾ ಒಂದು ಖಾಸಗಿ ಪ್ರಾಥಮಿಕ ಶಾಲೆಯನ್ನು ಸಹಾಯಾನುದಾನಕ್ಕೆ ಒಳಪಡಿಸಿದ ಪ್ರಥಮ ಸಂದರ್ಭದಲ್ಲಿ ಕೆಲವು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸದೇ ಉಳಿದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರುಗಳಿಂದ ತುಂಬಿಕೊಳ್ಳಬೇಕೆ ಹೊರತು ನೇರ ನೇಮಕಾತಿ ಮಾಡಿಕೊಳ್ಳತಕ್ಕದ್ದಲ್ಲ ಎಂಬುದಾಗಿ ಸುತ್ತೋಲೆ ಸಂಖ್ಯೆ: ಇಡಿ 267 ಪಿಎಂಸಿ 2007 ದಿನಾಂಕ:12.10.2007 ಆದೇಶಿಸಲಾಗಿದೆ. ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ: 31/12/2021ರವರೆಗೆ ಖಾಲಿ ಇರುವ ಬೋಧಕ ವೃಂದದ ಹುದ್ದೆಗಳು: 6754
ಆ	ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಯಾವ ಅವಧಿಯೊಳಗೆ ತುಂಬಿಕೊಳ್ಳಲು ಸರ್ಕಾರದಿಂದ ಅನುಮತಿಸಲಾಗಿದೆ; (ಜಿಲ್ಲಾವಾರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣವಾರು ಮಾಹಿತಿ ನೀಡುವುದು)	ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ: 31/12/2015ರ ಪೂರ್ವದಲ್ಲಿ ನಿವೃತ್ತಿ, ನಿಧನ, ಬಡ್ತಿ ಮತ್ತು ಇತರೆ ಕಾರಣಗಳಿಂದ ತೆರವಾದ 3633 ಹುದ್ದೆಗಳನ್ನು ಭರ್ತಿ ಮಾಡಲು 2018ರಲ್ಲಿ ಅನುಮೋದನೆ ನೀಡಲಾಗಿತ್ತು. ಆದರೆ, ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8 ದಿನಾಂಕ 10-06-2020ರಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಪ್ರಸ್ತಾವನೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡದಿರಲು ನಿರ್ದೇಶನ ನೀಡಲಾಗಿದೆ. ನಂತರ, ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:31-12-2015ರ ಪೂರ್ವದಲ್ಲಿ ನಿವೃತ್ತಿ , ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಿರುವ ಹುದ್ದೆಗಳ ಪೈಕಿ ಈಗಾಗಲೇ ಇಲಾಖೆಯಿಂದ ಅನುಮೋದನೆಗೊಂಡು ನೇಮಕಾತಿ ಪ್ರಕ್ರಿಯೆಯು ಇಲಾಖೆಯ ಹಂತದಲ್ಲಿ ಬಾಕಿಯಿರುವ ಅನುದಾನಿತ ಪ್ರೌಢಶಾಲೆಯ 257 ಭೋದಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆ ನೀಡಲಾಗಿದೆ. ಮುಂದುವರೆದು, ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:31-12-2015ರ ಪೂರ್ವದಲ್ಲಿ ನಿವೃತ್ತಿ , ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಿರುವ ಬಾಕಿ 2181 ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿ ನೀಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿದೆ.

ಇ	ಮೇಲ್ಕಂಡ ಖಾಲಿ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಇಲಾಖೆಯಿಂದ ಅನುಮತಿ ನೀಡಿದ್ದರೂ, ನಾನಾ ಕಾರಣಗಳನ್ನು ಒಡ್ಡಿ ನೇಮಕಾತಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕಾರಣಕ್ಕೋಸ್ಕರ ಮೇಲ್ಕಂಡ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ತೊಂದರೆ ಆಗುತ್ತಿದೆ;	ಬಂದಿದೆ. ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿ ರೂಪಿಸಲಾದ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಿಬ್ಬಂದಿ ನೇಮಕಾತಿ, ಸೇವಾ ಷರತ್ತುಗಳನ್ನು ಮತ್ತು ನಿಯಂತ್ರಣ) ನಿಯಮಗಳು 1999ರ ಅನೆಕ್ಷರ್-01 ಮತ್ತು ತಿದ್ದುಪಡಿ ನಿಯಮ 2008ರ ಉಪ ನಿಯಮ (3)ರಲ್ಲಿ ಪತ್ರಿಕಾ ಜಾಹಿರಾತು ನೀಡಲು ನಿಯಮಗಳನ್ನು ರೂಪಿಸಲಾಗಿದೆ. ಅದರಂತೆ ಪತ್ರಿಕಾ ಪ್ರಕಟಣೆ ನೀಡಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಿದೆ.
ಈ	2021ರ ಡಿಸೆಂಬರ್ ತನಕ ಖಾಲಿಯಾದ ಹುದ್ದೆಗಳ ಭರ್ತಿಗೆ ಅನುಮತಿ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು?	ಅನುದಾನಿತ ಪ್ರೌಢ ಶಾಲೆಗಳಲ್ಲಿ ದಿನಾಂಕ:01/01/2016 ರಿಂದ 31/12/2020ರವರೆಗಿನ ನಿವೃತ್ತಿ , ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಮೂರು ಆಯುಕ್ತಾಲಯಗಳಿಂದ ಮಾಹಿತಿ ಪಡೆಯಲು ಕ್ರಮವಹಿಸಲಾಗುತ್ತಿದೆ.

ಇಪಿ 97 ಎಸ್ಇಎಸ್ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು